## <u>ಕರ್ನಾಟಕ ಸರ್ಕಾರದ ನಡವಳಿಗಳು</u>

**ವಿಷಯ:** ಶ್ರೀ ಎಂ.ಮಹದೇವಪ್ಪ, ನಿವೃತ್ತ ಕಾರ್ಯನಿರ್ವಾಹಕ ಅಧಿಕಾರಿ ಇವರಿಗೆ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿ ನಿಯಮ 247-ಎ ರ ಪ್ರಕಾರ ಅರ್ಹತಾದಾಯಕ ಸೇವೆಯನ್ನು ಪರಿಗಣಿಸಿ ಮಂಜೂರು ಮಾಡುವ ಬಗ್ಗೆ.

**ಓದಲಾಗಿದೆ:-** ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಕೋಲಾರ ಇವರ ಪತ್ರ ಸಂಖ್ಯೆ: ಜಿಪಂಕೋ/ಸಿಬ್ಬಂದಿ (9)/ಸಿ.ಆರ್.05/2021-22/266, ದಿನಾಂಕ:29.05.2021.

*****

<u>ಪ್ರಸ್ತಾವನೆ:</u>

ಮೇಲೆ ಓದಲಾದ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಕೋಲಾರ ಇವರ ಪ್ರಸ್ತಾವನೆಯಲ್ಲಿ **ಶ್ರೀ ಎಂ.ಮಹದೇವಪ್ಪ,** ನಿವೃತ್ತ ಕಾರ್ಯನಿರ್ವಾಹಕ ಅಧಿಕಾರಿ ಇವರ ಜನ್ಮ **ದಿನಾಂಕ:14.04.1956** ಆಗಿದ್ದು, **ದಿನಾಂಕ:04.07.1978** ರಿಂದ ಮಿತವೇತನ ಪದವೀಧರರಾಗಿ ಸೇವೆ ಸಲ್ಲಿಸಿ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಮೈಸೂರು ಇವರ ಅಧಿಕೃತ ಜ್ಞಾಪನ **ದಿನಾಂಕ:18.03.1994**ರನ್ವಯ **ದಿನಾಂಕ: 31.03.1994** ರಿಂದ ಗ್ರಾಮ ಪಂಚಾಯಿತಿ ಕಾರ್ಯದರ್ಶಿ-ಕಂ-ದ್ವಿ.ದ.ಸ ಹುದ್ದೆಗೆ ನೇಮಕಾತಿ ಹೊಂದಿ ಕರ್ತವ್ಯ ನಿರ್ವಹಿಸಿರುತ್ತಾರೆ. ನಂತರ **ದಿನಾಂಕ:30.04.2016ರಂದು** ಕಾರ್ಯನಿರ್ವಾಹಕ ಅಧಿಕಾರಿ ಹುದ್ದೆಯ ಸೇವೆಯಿಂದ ವಯೋನಿವೃತ್ತಿ ಹೊಂದಿದ್ದು, ಸದರಿ ಅಧಿಕಾರಿಯವರು ಸರ್ಕಾರಿ ಸೇವೆಯಲ್ಲಿ ಸಕ್ರಮಗೊಳ್ಳುವ ಪೂರ್ವದಲ್ಲಿ ಮಿತವೇತನ ಪದವೀಧರರಾಗಿ ಸಲ್ಲಿಸಿರುವ ಸೇವೆಯನ್ನು ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಯ ನಿಯಮ **247-ಎ** ರ ಅವಕಾಶಗಳನ್ವಯ **02** ವರ್ಷಗಳ ಸೇವಾ ಅವಧಿಯನ್ನು ಪಿಂಚಣಿ ಉದ್ದೇಶಕ್ಕಾಗಿ ಅರ್ಹತಾದಾಯಕ ಸೇವೆಯೆಂದು ಪರಿಗಣಿಸಿ ಮಂಜೂರು ಮಾಡುವಂತೆ ಕೋರಿರುತ್ತಾರೆ.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಕೋಲಾರ ಇವರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿದೆ. ಶ್ರೀ ಎಂ. ಮಹದೇವಪ್ಪ ಇವರು ಮಿತವೇತನ ಪದವೀಧರರಾಗಿ ಕಾರ್ಯನಿರ್ವಹಿಸಿ, ತಮ್ಮ **30** ವರ್ಷಗಳ ವಯಸ್ಸಿನ ನಂತರ ಸರ್ಕಾರಿ ಸೇವೆಗೆ ನೇಮಕಾತಿ ಹೊಂದಿ, **ದಿನಾಂಕ:30.04.2016ರಂದು** ಸೇವೆಯಿಂದ ವಯೋನಿವೃತ್ತಿ ಹೊಂದಿರುವುದರಿಂದ, **ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ:ಆಇ 04 ಎಸ್‌ಆರ್‌ಎ 2016, ದಿನಾಂಕ: 10.04.2017ರಲ್ಲಿ** ಕಲ್ಪಿಸಲಾಗಿರುವ ಅವಕಾಶಗಳನ್ವಯ ಕರ್ನಾಟಕ ನಾಗರೀಕ ಸೇವಾ ನಿಯಮಗಳು, ನಿಯಮ **247-ಎ** ರಡಿ ಗರಿಷ್ಠ **2** ವರ್ಷಗಳ ಹೆಚ್ಚುವರಿ ಸೇವಾ ಅವಧಿಯನ್ನು ಪಿಂಚಣಿ ಉದ್ದೇಶಕ್ಕಾಗಿ ಅರ್ಹತಾದಾಯಕ ಸೇವೆಯನ್ನಾಗಿ ಪರಿಗಣಿಸಿ ಮಂಜೂರು ಮಾಡಲು ಸರ್ಕಾರವು ನಿರ್ಧರಿಸಿರುತ್ತದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 60 ಪರವ 2021, ಬೆಂಗಳೂರು**
**ದಿನಾಂಕ:09.05.2022.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಶ್ರೀ ಎಂ.ಮಹದೇವಪ್ಪ, ನಿವೃತ್ತ **ಕಾರ್ಯನಿರ್ವಾಹಕ ಅಧಿಕಾರಿ ಇವರಿಗೆ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 247-ಎ ರನ್ವಯ ಗರಿಷ್ಠ 2 ವರ್ಷಗಳ ಸೇವಾವಧಿಯನ್ನು ಪಿಂಚಣಿ ಉದ್ದೇಶಕ್ಕಾಗಿ ಅರ್ಹತಾದಾಯಕ ಸೇವೆಯೆಂದು ಪರಿಗಣಿಸಿ** ಆದೇಶಿಸಿದೆ.

ಈ ಆದೇಶವನ್ನು **ಸರ್ಕಾರದ ಆದೇಶ ಸಂಖ್ಯೆ:ಆಇ 04 ಎಸ್ಆರ್ಎ 2016, ದಿನಾಂಕ: 10.04.2017ರನ್ವಯ** ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಲಾಗಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,
09/05/2022
**(ಬಾಲಪ್ಪ)**
ಸರ್ಕಾರದ ಅಧೀನ ಕಾರ್ಯದರ್ಶಿ (ಸೇ-ಬಿ&ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಇವರಿಗೆ:**

1) ಮಹಾಲೇಖಪಾಲರು (ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕೋಲಾರ ಜಿಲ್ಲೆ-ಮೂಲ ಸೇವಾ ಪುಸ್ತಕವನ್ನು ಇದರೊಂದಿಗೆ ಲಗತ್ತಿಸಿ ಕಳುಹಿಸಿದೆ.
3) ಸಂಬಂಧಿಸಿದವರಿಗೆ. (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಕೋಲಾರ ಜಿಲ್ಲೆ ಇವರ ಮುಖಾಂತರ).
4) ಮೇಲ್ವಿಚಾರಕರು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
5) ಮಾಹಿತಿ ಕೇಂದ್ರ/ ಶಾಖಾ ರಕ್ಷಕ ಕಡತ/ ಹೆಚ್ಚುವರಿ ಪ್ರತಿ.

**ಪ್ರತಿ:**

ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ ಉಪ ಕಾರ್ಯದರ್ಶಿ (ಆಡಳಿತ-2), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ/ ಆಪ್ತ ಸಹಾಯಕರುಗಳಿಗೆ.